ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಮುಖ್ಯಮಂತ್ರಿಗಳು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು

ಶ್ರೀ ಬಿ. ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು):– ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

(ಇ) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕ 2011

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು):– ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು: ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2011ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ

ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ

ಖಂಡ 2 ಮತ್ತು 3

ಅಧ್ಯಕ್ಷರು: 2 ಮತ್ತು 3ನೆ ಖಂಡಗಳು ವಿಧೇಯಕದ ಅಂಗವಾಗಿರಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ

2 ಮತ್ತು 3ನೆ ಖಂಡಗಳು ವಿಧೇಯಕದ ಅಂಗವಾದವು.

ಮೊದಲನೆ ಖಂಡ, ಹೆಸರು ಮತ್ತು ಅವತರಣಿಕೆ

ಅಧ್ಯಕ್ಷರು: ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಭಾಗವಾಗಬೇಕೆಂಬುದು ಸಭೆಯ ಮಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಪ್ರಸ್ತಾವದ ಅಂಗೀಕಾರ

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು:– ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ

ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ, **2011ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು**

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

2. ಕರ್ನಾಟಕ (ಪ್ರಾದೇಶಿಕ ಕಾನೂನುಗಳು) ನಿರಸನಗೊಳಿಸುವ ವಿಧೇಯಕ 2011

ಶ್ರೀ ಎಸ್.ಸುರೇಶ್ ಕುಮಾರ್: (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):- ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕೃತ ರೂಪದಲ್ಲಿರುವ 2011ನೇ ಸಾಲಿನ ಕರ್ನಾಟಕ (ಪ್ರಾದೇಶಿಕ ಕಾನೂನುಗಳು) ನಿರಸಿನಗೊಳಿಸುವ ವಿಧೇಯಕವನ್ನು ಪಾರ್ಯಲೋಚಿಸಬೇಕೆಂದು ಸೂಚಿಸುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಎಸ್.ಸುರೇಶ್ ಕುಮಾರ್: (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):- ಮಾನ್ಯ ಸಭಾಧ್ಯಕ್ಷರೆ, 1956 ನೇ ಇಸವಿಯಲ್ಲಿ ನಮ್ಮ ರಾಜ್ಯ ಏನು ಸ್ಥಾಪನೆಯಾಯಿತು, ರಾಜ್ಯಗಳ ಪುನರ್‌ವಿಂಗಡನೆಯಾಯಿತು, ಅದಕ್ಕಿಂತ ಮುಂಚೆ ವಿಶೇಷವಾಗಿ ಬೆಳಗಾವಿ ಪ್ರದೇಶದ ಮುಂಬೈ ಕರ್ನಾಟಕ ಪ್ರದೇಶ, ಕೊಡುಗು ಜಿಲ್ಲೆ, ಗುಲ್ಬರ್ಗಾ ಪ್ರದೇಶದ ಹೈದರಾಬಾದ್ ಕರ್ನಾಟಕ ಮತ್ತು ಹಳೆಯ ಮೈಸೂರಿನ ಪ್ರದೇಶಗಳಲ್ಲಿ ಕೆಲವೊಂದಿಷ್ಟು ಕಾಯಿದೆಗಳಿದ್ದವು. 1956ರ ನಂತರ ಹೊಸ ಹೊಸ ಕಾಯಿದೆಗಳು ಬಂದ ಮೇಲೆ ಈ ಯಾವುದೇ ಕಾಯಿದೆಗಳು ಕಳೆದ ಸುಮಾರು 55 ವರ್ಷಗಳಲ್ಲಿ ನಾವು ಉಪಯೋಗಿಸುತ್ತಿಲ್ಲ. ಯಾವ್ಯಾವ ಕಾಯಿದೆಗಳು ಇವತ್ತು ಅನುಪಯುಕ್ತವಾಗಿವೆ ಇದನ್ನು ಪರಿಶೀಲಿಸಿ ಶಿಫಾರಸ್ಸು ಮಾಡಿ ವರದಿ ಸಲ್ಲಿಸಲು ಕರ್ನಾಟಕ ಉಡಳಿತ ನ್ಯಾಯಮಂಡಳಿಯ ನಿವೃತ್ತ ಉಪಾಧ್ಯಕ್ಷರಾದ ಶ್ರೀ ಕೆ.ಆರ್.ಚಾಮಯ್ಯನವರ ನೇತೃತ್ವದಲ್ಲಿ ಒಂದು ಸಮಿತಿಯನ್ನು ರಚಿಸಲಾಗಿತ್ತು. ಆ ಸಮಿತಿಯವರು ಈಗಾಗಲೇ ಕಳೆದ ವರ್ಷ ವರದಿಯ ಒಂದು ಕಂತನ್ನು ಕೊಟ್ಟಿದ್ದು ಅದನ್ನು ನಾವು ಸದನದಲ್ಲಿ ಮಂಡಿಸಿ ಅನುಮೋದನೆ ತೆಗೆದುಕೊಂಡಿದ್ದೆವು. ಆ ಸಮಿತಿಯ ಮೊದಲಿನ ವರದಿ ಪ್ರಕಾರ ಈ ಎಲ್ಲಾ ಭಾಗಗಳ ಸುಮಾರು 541ಕ್ಕಿಂತ ಹೆಚ್ಚು ಅಧಿನಿಯಮಗಳನ್ನು ಕಾಯಿದೆಗಳನ್ನು ನಾವು ನಿರಸನಗೊಳಿಸಿದೆವು. ಈಗ ಆ ಸಮಿತಿ ಎರಡನೆ ವರದಿ ಕೊಟ್ಟಿದೆ. ಅದರ ಪ್ರಕಾರ ಬೆಳಗಾವಿ ಪ್ರದೇಶದ 41 ಅಧಿನಿಯಮಗಳು, ಕಾಯಿದೆಗಳು,